# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 1586 |
| ಸದಸ್ಯರ ಹೆಸರು | : ಶ್ರೀ ಎಂ.ನಾಗರಾಜು<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : 18-03-2026. |
| ಉತ್ತರಿಸುವ ಸಚಿವರು | : ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>2025ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ಘೋಷಿಸಲಾದ 250 ಮೌಲಾನಾ ಆಜಾದ್ ಮಾದರಿ ಆಂಗ್ಲ ಮಾಧ್ಯಮ ಶಾಲೆಗಳ (ಪೂರ್ವ ಪ್ರಾಥಮಿಕ ಯಿಂದ ಪಿ.ಯು.ಸಿ. ವರೆಗೆ) ನಿರ್ಮಾಣ ಕಾಮಗಾರಿಯು ಪ್ರಸ್ತುತ ಯಾವ ಹಂತದಲ್ಲಿದೆ; ಎಷ್ಟು ಶಾಲೆಗಳನ್ನು ನಿರ್ಮಿಸಲಾಗಿದೆ ಮತ್ತು ಎಷ್ಟು ಬಾಕಿ ಇವೆ; ಈ ಶಾಲೆಗಳಲ್ಲಿ ಅಗತ್ಯವಿರುವಷ್ಟು ಸಿಬ್ಬಂದಿಗಳು ಲಭ್ಯವಿದ್ದಾರೆಯೇ;</td><td>
2025ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ 250 ಮೌಲಾನಾ ಆಜಾದ್ ಆಂಗ್ಲ ಮಾಧ್ಯಮ ಮಾದರಿ ಶಾಲೆಗಳಲ್ಲಿ (ಪೂರ್ವ ಪ್ರಾಥಮಿಕ ಹಂತದಿಂದ ಪಿಯು ವರೆಗಿನ) ಪ್ರಸಕ್ತ ಸಾಲಿನಿಂದ 100 ಶಾಲೆಗಳಲ್ಲಿ ಎಲ್.ಕೆ.ಜಿ. ತರಗತಿಗಳನ್ನು ಪ್ರಾರಂಭಿಸಲಾಗಿದ್ದು, ಸದರಿ 100 ಶಾಲೆಗಳ ಪೈಕಿ 76 ಶಾಲೆಗಳಿಗೆ ಕಾಮಗಾರಿಗಳನ್ನು ಕೈಗೊಳ್ಳುವ ಕುರಿತಂತೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ.
2025ನೇ ಸಾಲಿನಲ್ಲಿ ಘೋಷಿಸಲಾದ ಮೌಲಾನಾ ಆಜಾದ್ ಮಾದರಿ ಆಂಗ್ಲ ಮಾಧ್ಯಮ ಶಾಲೆಗಳಲ್ಲಿನ ಪೂರ್ವ ಪ್ರಾಥಮಿಕ ವಿಭಾಗಕ್ಕೆ ಯಾವುದೇ ಹುದ್ದೆಗಳು ಮಂಜೂರಾಗಿರುವುದಿಲ್ಲ.
ಮುಂದುವರೆದು, ಅಲ್ಪಸಂಖ್ಯಾತರ ನಿರ್ದೇಶನಾಲಯದಡಿ ಕಾರ್ಯನಿರ್ವಹಿಸುತ್ತಿರುವ 300 ಮೌಲಾನಾ ಆಜಾದ್ ಮಾದರಿ ಶಾಲೆಗಳಿಗೆ ಮಂಜೂರು, ಖಾಲಿ ಹಾಗೂ ಭರ್ತಿಯಾಗಿರುವ ಹುದ್ದೆಗಳ ವಿವರ ಈ ಕೆಳಕಂಡಂತಿದೆ.
<table>
<tr><th rowspan="2">ಕ್ರ. ಸಂ</th><th rowspan="2">ಸಂಸ್ಥೆ</th><th colspan="2">ಮಂಜೂರಾದ ಹುದ್ದೆಗಳ ಸಂಖ್ಯೆ</th><th rowspan="2">ಒಟ್ಟು</th><th rowspan="2">ಭರ್ತಿಯಾದ ಖಾಯಂ ಹುದ್ದೆಗಳ ಸಂಖ್ಯೆ</th><th rowspan="2">ಒಟ್ಟು</th><th rowspan="2">ಖಾಲಿ ಇರುವ ಖಾಯಂ ಹುದ್ದೆಗಳ ಸಂಖ್ಯೆ</th><th rowspan="2">ಒಟ್ಟು</th></tr>
<tr><th>ಖಾಯಂ</th><th>ಹೊರಗುತ್ತಿಗೆ</th></tr>
<tr><td>1</td><td>ಮೌಲಾನಾ ಆಜಾದ್ ಮಾದರಿ ಶಾಲೆ</td><td>1500</td><td>1525</td><td>3025</td><td>525</td><td>525</td><td>975</td><td>975</td></tr>
</table>
ಮೇಲ್ಕಂಡಂತೆ ಪ್ರಸ್ತುತ ಖಾಲಿ ಇರುವ ಖಾಯಂ ಹಾಗೂ ಹೊರಗುತ್ತಿಗೆ /ಅತಿಥಿ ಶಿಕ್ಷಕರ ಹುದ್ದೆಗಳಿಗೆ ತಾತ್ಕಾಲಿಕವಾಗಿ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗಿರುತ್ತದೆ.
ಮುಂದುವರೆದು, ಸದರಿ ಶಾಲೆಗಳಲ್ಲಿ ಪ್ರಸ್ತುತ ಖಾಲಿ ಇರುವ ಖಾಯಂ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಪರಿಶೀಲಿಸಲಾಗುತ್ತಿದೆ.
</td></tr>
</table>

.......2

<table>
<tr>
<td>ಆ)</td>
<td>NIOS-Aligned ಶಿಕ್ಷಣಕ್ಕಾಗಿ ಮದರಸಾಗಳಿಗೆ ಕಂಪ್ಯೂಟರ್‌ಗಳು ಮತ್ತು ಸ್ಮಾರ್ಟ್ ಬೋರ್ಡ್ ಗಳನ್ನು ಒದಗಿಸುವ 2025ರ ಪ್ರಸ್ತಾವನೆಯನ್ನು ಕಾರ್ಯಗತಗೊಳಿಸಲು ಸರ್ಕಾರದಿಂದ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ;</td>
<td>2025-26ಸಾಲಿನ ಆಯವ್ಯಯ ಭಾಷಣದ ಕಂಡಿಕೆ-216 ರಲ್ಲಿ ಮದರಸಾಗಳಲ್ಲಿ ಧಾರ್ಮಿಕ ಶಿಕ್ಷಣದೊಂದಿಗೆ ಔಪಚಾರಿಕ ಶಿಕ್ಷಣವನ್ನು ನೀಡಲು ಕಂಪ್ಯೂಟರ್ , ಸ್ಮಾರ್ಟ್ ಬೋರ್ಡ್ ಇತ್ಯಾದಿ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಿ, ಮದರಸಾಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು NIOS ಮೂಲಕ SSLC ಪರೀಕ್ಷೆ ಬರೆಯಲು ಅವಕಾಶವಾಗುವಂತೆ , ಅವಶ್ಯಕವಾಗಿ ಬೇಕಾಗಿರುವ 2 ರಿಂದ 3 ತರಗತಿ ಕೊಠಡಿಗಳು, ವಿದ್ಯಾರ್ಥಿಗಳ ವಸತಿಗಾಗಿ 02 ವಸತಿ ಕೊಠಡಿ/ಡಾರ್ಮೆಟ್ರಿ, ಸ್ನಾನ ಗೃಹಗಳು/ಶೌಚಾಲಯಗಳು ಹಾಗೂ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲು ಲೆಕ್ಕಶೀರ್ಷಿಕೆ:2225-04-277-0-07(103) "ಮದರಸಾಗಳಲ್ಲಿ ಉತ್ತಮ ಗುಣಮಟ್ಟದ ಶಿಕ್ಷಣವನ್ನು ಒದಗಿಸುವುದರಡಿ" 70 ಮದರಸಾಗಳಿಗೆ ತಲಾ ರೂ.50.00 ಲಕ್ಷಗಳಂತೆ ಒಟ್ಟು ರೂ.35.00 ಕೋಟಿಗಳನ್ನು ಮಂಜೂರು ಮಾಡಲಾಗಿದ್ದು, ಸಂಬಂಧಪಟ್ಟ ಜಿಲ್ಲೆಯ ನಿರ್ಮಿತಿ ಕೇಂದ್ರ – ಜಿಲ್ಲಾಧಿಕಾರಿಗಳ ಮೂಲಕ 70 ಮದರಸಾಗಳಲ್ಲಿ ಅನುಷ್ಠಾನಗೊಳಿಸಲು ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಅನುದಾನದ ಲಭ್ಯತೆಯನುಸಾರ ರೂ.34.95 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ.</td>
</tr>
<tr>
<td>ಇ)</td>
<td>2025ನೇ ಸಾಲಿನಲ್ಲಿ ವಿದೇಶಿ ವಿದ್ಯಾರ್ಥಿಗಳ ವಿದ್ಯಾರ್ಥಿವೇತನಯೋಜನೆಯಡಿ ರಾಜ್ಯದಲ್ಲಿ ಎಷ್ಟು ಮಕ್ಕಳು ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಸಲ್ಲಿಸಿದ್ದರು ಮತ್ತು ಎಷ್ಟು ಮಕ್ಕಳು ಈ ವಿದ್ಯಾರ್ಥಿವೇತನವನ್ನು ಪಡೆದಿದಾರೆ;</td>
<td>
<table>
<tr><td>ಸ್ವೀಕರಿಸಲಾದ ಅರ್ಜಿಗಳ ಸಂಖ್ಯೆ</td><td>ವಿದ್ಯಾರ್ಥಿವೇತನ ಪಾವತಿಸಲಾದ ಅರ್ಜಿಗಳ ಸಂಖ್ಯೆ</td></tr>
<tr><td>692</td><td>374<br>(ದಿನಾಂಕ:05.03.206 ರವರೆಗೆ)</td></tr>
</table>
ಸರ್ಕಾರದ ಆದೇಶದಲ್ಲಿನ ಮಾರ್ಗ ಸೂಚಿಗಳನ್ವಯ ಕಾಲಕಾಲಕ್ಕೆ ವಿದ್ಯಾರ್ಥಿಗಳು ಸಲ್ಲಿಸಲಾಗುತ್ತಿರುವ ದಾಖಲಾತಿಗಳನ್ನು ಪರಿಶೀಲಿಸಿ ಅರ್ಹ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನವನ್ನು ಪಾವತಿಸಲಾಗುತ್ತಿದೆ.</td>
</tr>
<tr>
<td>ಈ)</td>
<td>2025ರಲ್ಲಿ ಘೋಷಿಸಿರುವ ವೃತ್ತಿಪರ ಕೋರ್ಸ್ ಗಳಿಗೆ (ಕೆಇಎ ಪ್ರವೇಶ) ಶೇ50 ರಷ್ಟು ಶುಲ್ಕ ಮರುಪಾವತಿಯಿಂದ ಎಷ್ಟು ಅಲ್ಪಸಂಖ್ಯಾತ ವಿದ್ಯಾರ್ಥಿಗಳು ಪ್ರಯೋಜನ ಪಡೆದಿದ್ದಾರೆ? (ಮಾಹಿತಿ ನೀಡುವುದು)</td>
<td>2025-26ನೇ ಸಾಲಿನಲ್ಲಿ KEA ಮೂಲಕ ಪ್ರವೇಶ ಪಡೆದ ವಿದ್ಯಾರ್ಥಿಗಳಿಂದ 2,03,800 ಅರ್ಜಿಗಳು ಸ್ವೀಕೃತವಾಗಿದ್ದು, ಅರ್ಜಿಗಳ ಪರಿಶೀಲನೆ ಕಾರ್ಯ ಪ್ರಗತಿಯಲ್ಲಿರುತ್ತದೆ. ಅನುದಾನದ ಲಭ್ಯತೆಯನುಸಾರ ದಿನಾಂಕ:05.03.206 ರವರೆಗೆ ಒಟ್ಟು 61,813 ವಿದ್ಯಾರ್ಥಿಗಳಿಗೆ ರೂ.64.51 ಕೋಟಿ ವಿದ್ಯಾರ್ಥಿವೇತನವನ್ನು ಪಾವತಿಸಲಾಗಿದೆ.</td>
</tr>
</table>

**ಸಂಖ್ಯೆ:MWD 37 LMQ 2026**

**(ಬಿ.ಜೆಡ್.ಜಮೀರ್ ಅಹ್ಮದ್ ಖಾನ್)**
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು